# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 2 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1263 |
| 3 | ಉತ್ತರಿಸಬೇಕಾದ ದಿನಾಂಕ | : | 22-08-2025 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊರಗುತ್ತಿಗೆ ಆಧಾರದಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಳೆದ ನಾಲ್ಕು ತಿಂಗಳುಗಳಿಂದ ವೇತನ ಪಾವತಿಯಾಗದಿರುವುದರಿಂದ ಅವರು ತೀವ್ರ ಸಂಕಷ್ಟಕ್ಕೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2025-26 ನೇ ಆರ್ಥಿಕ ಸಾಲಿನಿಂದ ಅನ್ವಯಿಸುವಂತೆ, ಕೇಂದ್ರ ಸರ್ಕಾರವು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಆರ್ಥಿಕ ವಹಿವಾಟುಗಳನ್ನು ಕೈಗೊಳ್ಳಲು "SNA SPARSH" ತಂತ್ರಜ್ಞಾನವನ್ನು ಕಡ್ಡಾಯವಾಗಿ ಜಾರಿಗೊಳಿಸಿರುತ್ತಾರೆ. ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ದಿನಾಂಕ: 03-06-2025 ರ ಮೂಲ ಮಂಜೂರಾತಿ ಆದೇಶದ ಮೂಲಕ, ಆಡಳಿತ ವೆಚ್ಚಕ್ಕಾಗಿ ಅನುದಾನ ಬಿಡುಗಡೆಯಾಗಿರುತ್ತದೆ. ಮುಂದುವರೆದು, "SNA SPARSH" ತಂತ್ರಜ್ಞಾನದ ಮೂಲಕ ಆರ್ಥಿಕ ವಹಿವಾಟು ಕೈಗೊಳ್ಳಲು ಹಲವು ತಾಂತ್ರಿಕ ಸಮಸ್ಯೆ ಎದುರಾದ ಕಾರಣ ವೇತನ ಪಾವತಿಯ ವಿಳಂಬಕ್ಕೆ ಕಾರಣವಾಗಿತ್ತು.<br>ಪ್ರಸ್ತುತ ಅನುದಾನ ಬಿಡುಗಡೆಯಾಗಿದ್ದು ಸಿಬ್ಬಂದಿಗಳಿಗೆ ವೇತನ ಪಾವತಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಸದರಿ ಸಿಬ್ಬಂದಿಗಳಿಗೆ ಕಳೆದ ನಾಲ್ಕು ತಿಂಗಳುಗಳಿಂದ ವೇತನ ಪಾವತಿಯಾಗದಿರಲು ಕಾರಣಗಳೇನು; | |
| ಇ) | ಸದರಿ ಸಿಬ್ಬಂದಿಗಳಿಗೆ ಯಾವ ಕಾಲಮಿತಿಯೊಳಗೆ ಬಾಕಿ ಇರುವ ವೇತನವನ್ನು ಪೂರ್ಣವಾಗಿ ಪಾವತಿಸಲಾಗುವುದು; | |
| ಈ) | ಈ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ನಿಗದಿತ ಅವಧಿಯೊಳಗೆ ವೇತನ ಪಾವತಿಯಾಗುವಂತೆ ಸರ್ಕಾರ ಕೂಡಲೇ ಅಗತ್ಯ ಕ್ರಮವಹಿಸುವುದೇ? | ಹೊರಗುತ್ತಿಗೆ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ದಿನಾಂಕ 05 ರೊಳಗೆ ವೇತನ ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಈಗಾಗಲೇ ಜಿಲ್ಲಾ ಪಂಚಾಯತಿಗಳಿಗೆ ನಿರ್ದೇಶನ ನೀಡಲಾಗಿದ್ದು, ಮುಂದುವರೆದಂತೆ ಮಾನವ ಸಂಪನ್ಮೂಲ ಸಂಸ್ಥೆಗಳಿಗೆ, ಸರ್ಕಾರದಿಂದ ಸದರಿ ಸಿಬ್ಬಂದಿಗಳ ವೇತನ ಪಾವತಿಯಾಗುವ ವರೆಗೂ ಕಾಯದೆಯೇ ಮುಂಗಡವಾಗಿ ವೇತನ ಪಾವತಿಸಲು ಸಂಬಂಧಪಟ್ಟ ಮಾನವ ಸಂಪನ್ಮೂಲ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಆಡಳಿತ ವೆಚ್ಚದಡಿ ಸಂಭಾವನೆ/ಗೌರವಧನ ಪಾವತಿಸಲು ಬಾಕಿ ಉಳಿದಿದ್ದ ಸಿಬ್ಬಂದಿಗಳ ಹಿಂದಿನ ಬಾಕಿ ವೇತನವನ್ನು ಪಾವತಿಸಲು ಈಗಾಗಲೇ ಕ್ರಮ ವಹಿಸಲಾಗಿದೆ. |

**ಸಂಖ್ಯೆ: ಗ್ರಾಅಪ/674(4)/ಉಖಾಯೋ/2025**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು